ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೧೨

# ಕರ್ನಾಟಕ ವಿಧಾನ ಪರಿಷತ್ತು

## ನೂರ ಇಪ್ಪತ್ತೈದನೆಯ ಅಧಿವೇಶನ

### ಮಂಗಳವಾರ, ದಿನಾಂಕ: ೦೮ನೇ ಜುಲೈ ೨೦೧೪

**ಸಮೂಹ – II**

೧. ಇಂಧನ ಸಚಿವರು

೨. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು

೩. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು

೪. ಲೋಕೋಪಯೋಗಿ ಸಚಿವರು

೫. ಸಹಕಾರ ಮತ್ತು ಸಕ್ಕರೆ ಸಚಿವರು

೬. ಕೃಷಿ ರಾಜ್ಯ ಸಚಿವರು

## ಪದವೀಧರ ಯುವಕರಿಗೆ ಬೃಹತ್ ಉದ್ದಿಮೆಗಳಲ್ಲಿ ಉದ್ಯೋಗಾವಕಾಶ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೧೬೬ (೯೨೬) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಿರುದ್ಯೋಗಿ ಪದವೀಧರ ಯುವಕರಿಗೆ ಉದ್ದಿಮೆಗಳಲ್ಲಿ ಉದ್ಯೋಗಾವಕಾಶ ಒದಗಿಸುವ ದೃಷ್ಟಿಯಿಂದ ಸ್ಟೈಪಂಡ್ ನೀಡಿ ಅಥವಾ ಬೇರೆ ಇನ್ನಾವುದೇ ರೂಪದಲ್ಲಿ ಅವರಿಗೆ ಹಣ ಸಂದಾಯ ಸಿಗುವಂತೆ ಮಾಡಲು ಟ್ರೈನಿ ಅಥವಾ ಬೇರೆ ಯಾವುದಾದರೂ ಹುದ್ದೆಗಳನ್ನು ಸೃಷ್ಟಿಸಿ ನೌಕರಿ ಕೊಡಲು ಉದ್ದಿಮೆದಾರರಿಗೆ ಸೂಚಿಸಲಾಗುವುದೇ ;

(ಆ) ರಾಜ್ಯದಲ್ಲಿ ನಿರುದ್ಯೋಗಿ ಪದವೀಧರರ ಸಂಖ್ಯೆ ಹೆಚ್ಚುತ್ತಿದ್ದು, ಅವರಿಗೆ ಉದ್ಯೋಗಾವಕಾಶಗಳನ್ನು ಒದಗಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಇ) ಎಷ್ಟು ಜನ ನಿರುದ್ಯೋಗಿ ಪದವೀಧರರು ಇರುವರೆಂದು ಅಂಕಿ, ಅಂಶಗಳು ಸರ್ಕಾರದಲ್ಲಿ ಲಭ್ಯವಿದೆಯೇ ;

(ಈ) ನಿರುದ್ಯೋಗಿ ಪದವೀಧರ ಯುವಕರಿಗೆ ಉದ್ಯೋಗ ಸಿಗುವವರೆಗೆ ಅಥವಾ ಎರಡು ವರ್ಷಗಳ ಕಾಲ ಸ್ಟೈಪಂಡ್ ಕೊಡಲು ಸರ್ಕಾರದವರು ಪರಿಶೀಲಿಸಲಾಗುವುದೇ ; ಹಾಗೂ ಇದರಿಂದ ಸರ್ಕಾರದ ಮೇಲೆ ಎಷ್ಟು ಆರ್ಥಿಕ ಭಾರ ಬೀಳುವುದು ? (ವಿವರ ನೀಡುವುದು)

## ನಿವೇಶನ ಮಾಲೀಕರಿಗೆ ಬದಲಿ ಜಾಗ ಮಂಜೂರಾತಿ

**ಶ್ರೀ ಆರ್.ಕೆ. ಸಿದ್ದರಾಮಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೬೭ (೯೦೪) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗ ಜಿಲ್ಲೆಯ ಹೊಸನಗರ ಪಟ್ಟಣ ಪಂಚಾಯ್ತಿ ವ್ಯಾಪ್ತಿಯ ೫ನೇ ವಾರ್ಡ್, ಚೌಡಮ್ಮ ರಸ್ತೆ ಅಗಲೀಕರಣಕ್ಕೆ ಖಾತೆದಾರರಿಂದ ಪಡೆಯಲಾದ ನಿವೇಶನದ ಮಾಲೀಕರಿಗೆ ಸಂವೇದಿಯಾಗಿ ಬದಲಿ ನಿವೇಶನದಲ್ಲಿ ಬದಲಿ ಜಾಗ ಮಂಜೂರು ಮಾಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಬಂದಿದ್ದಲ್ಲಿ, ಎಷ್ಟು ವರ್ಷಗಳಿಂದ ಬಾಕಿಯಿದೆ ; ಇದುವರೆಗೂ ಸರ್ಕಾರ ಕೈಗೊಂಡ ಕ್ರಮವೇನು;

(ಇ) ನಿವೇಶನ ಮಾಲೀಕರಿಗೆ ಸಂವೇದಿಯಾಗಿ ಬದಲಿ ನಿವೇಶನದಲ್ಲಿ ಬದಲಿ ಜಾಗ ಯಾವಾಗ ಮಂಜೂರಾತಿ ಮಾಡಲಾಗುವುದು ?

## ಲೈನ್‌ಮ್ಯಾನ್‌ಗಳ ಕೊರತೆಯಿಂದ ಸಮಸ್ಯೆಗಳು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) –**

೧೬೮ (೯೭೫) ಇಂಧನ ಸಚಿವರು ಈ ವಿಷಯಗಳನ್ನು ದಯಮಾಡಿ ತಿಳಿಸುವರೆ :–

(ಅ) ರಾಜ್ಯದ ಇಂಧನ ಇಲಾಖೆಯಲ್ಲಿ ಮಂಜೂರಾಗಿರುವ ಲೈನ್‌ಮನ್ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ)

(ಆ) ಮಂಜೂರಾಗಿರುವ ಹುದ್ದೆಗಳಲ್ಲಿ ಹಾಲಿ ಕಾರ್ಯ ನಿರ್ವಹಿಸುತ್ತಿರುವ ಲೈನ್‌ಮನ್‌ಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ)

(ಇ) ಲೈನ್‌ಮನ್‌ಗಳ ಕೊರತೆಯಿಂದ ಸಮರ್ಪಕ ವಿದ್ಯುತ್ ಪೂರೈಕೆಗೆ ತುಂಬಾ ಸಮಸ್ಯೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಾದರೆ, ಸಮಸ್ಯೆಗಳ ಪರಿಹಾರಕ್ಕೆ ಸರ್ಕಾರ ಇದುವರೆವಿಗೂ ಕೈಗೊಂಡಿರುವ ಕ್ರಮಗಳೇನು ; (ವಿವರಗಳೊಡನೆ)

## ತೋಟಗಾರಿಕೆ ವಿಶ್ವವಿದ್ಯಾಲಯದ ಬೋಧಕ ಮತ್ತು ಬೋಧಕೇತರ ಹುದ್ದೆಗಳು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೧೬೯ (೯೪೬) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆಯ ತೋಟಗಾರಿಕಾ ವಿಶ್ವವಿದ್ಯಾಲಯದಲ್ಲಿ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಯಾರು ಯಾರು, ಯಾವ ಯಾವ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ ;

೧. ಅಲ್ಲಿ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ;

೨. ಖಾಯಂ ನೇಮಕಾತಿಗಳು ಎಷ್ಟು ; ಯಾವುವು ;

೩. ತಾತ್ಕಾಲಿಕ ಹುದ್ದೆಗಳು ಯಾವುವು, ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಆ) ಬಾಗಲಕೋಟೆ ತೋಟಗಾರಿಕೆ ವಿಶ್ವ ವಿದ್ಯಾಲಯದಲ್ಲಿ ಸರ್ಕಾರ ಒದಗಿಸಿರುವ ಮೂಲಭೂತ ಸೌಕರ್ಯಗಳು ಯಾವುವು ; (ಸಂಪೂರ್ಣ ವಿವರ ನೀಡುವುದು)

೧. ನಿರ್ಮಾಣ ಹಂತದಲ್ಲಿರುವವು ಯಾವುವು ;

೨. ನಿರ್ಮಾಣ ಪೂರ್ಣಗೊಂಡಿರುವವು ಯಾವುವು ;

೩. ಉದ್ದೇಶಿಸಿರುವ ನಿರ್ಮಾಣಗಳು ಯಾವುವು ?

## ಕೃಷಿ ಭೂಮಿಯ ವಿಸ್ತೀರ್ಣ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೧೭೦ (೯೭೭) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೃಷಿಗೆ ಯೋಗ್ಯವಿರುವ ಭೂಮಿಯ ವಿಸ್ತೀರ್ಣವೆಷ್ಟು ;

(ಆ) ಇದರಲ್ಲಿ ನೀರಾವರಿ ಹಾಗೂ ಒಣ ಬೇಸಾಯ ಕೃಷಿ ಭೂಮಿಯ ವಿಸ್ತೀರ್ಣವನ್ನು ನೀಡುವುದು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಒಣ ಬೇಸಾಯಕ್ಕೆ ಸರ್ಕಾರ ನೀಡುತ್ತಿರುವ ಪ್ರೋತ್ಸಾಹದಾಯಕ ಕಾರ್ಯಕ್ರಮಗಳೇನು ; ಹಾಗೂ ಈ ಕಾರ್ಯಕ್ರಮಗಳಿಗೆ ಸರ್ಕಾರ ವ್ಯಯ ಮಾಡುತ್ತಿರುವ ಹಣವೆಷ್ಟು ?

## ಲೋಕೋಪಯೋಗಿ ಇಲಾಖೆಯಲ್ಲಿ ನಿಯಂತ್ರಣ ತಪ್ಪಿದ ಆಡಳಿತ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೭೧ (೯೩೩) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಲೋಕೋಪಯೋಗಿ ಇಲಾಖಾ ಕಛೇರಿಗಳಿಗೆ ಕರ್ತವ್ಯದ ಸಮಯದ ಅವಧಿಯೆಷ್ಟು ; ಎಷ್ಟು ಜನ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ನಿಗದಿಪಡಿಸಲಾದ ಅವಧಿಯನ್ನು ಪಾಲಿಸುತ್ತಾರೆ ; ನಿಗದಿಪಡಿಸಲಾದ

ಅವಧಿಯನ್ನು ಪಾಲಿಸದಿರುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ಸಂಖ್ಯೆ ಎಷ್ಟು ; ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಸಿಬ್ಬಂದಿಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆ ;

(ಆ) ಲೋಕೋಪಯೋಗಿ ಇಲಾಖೆಯಲ್ಲಿ ಕಡತಗಳು ಅನಾವಶ್ಯಕವಾಗಿ ೨೫ಕ್ಕೂ ಮಿಕ್ಕಿ ಮೇಜುಗಳ ಮುಖಾಂತರ ಅಲೆದಾಡುವ ಉದ್ದೇಶವೇನು ; ಇವುಗಳನ್ನು ನಿಯಂತ್ರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ; ಇಲ್ಲವಾದಲ್ಲಿ ಕಾರಣವೇನು ;

(ಇ) ಲೋಕೋಪಯೋಗಿ ಇಲಾಖೆಯಲ್ಲಿ ಕಾಮಗಾರಿಗಳ ಗುಣಮಟ್ಟದ ಪರೀಕ್ಷೆಗೆ (ಕ್ವಾಲಿಟಿ ಕಂಟ್ರೋಲ್) ಇರುವ ವ್ಯವಸ್ಥೆಗಳೇನು ; ರಾಜ್ಯದಲ್ಲಿ ಸೇತುವೆ, ವಸತಿ ಸಮುಚ್ಛಯ ಇತ್ಯಾದಿಗಳ ನಿರ್ಮಾಣದಲ್ಲಿ ಬಳಸುತ್ತಿರುವ ಆರ್.ಎಂ.ಸಿ. (R.M.C.) ಕಾಂಕ್ರೀಟ್ ಯಂತ್ರದಲ್ಲಿ ತಯಾರಿಸಲ್ಪಡುತ್ತಿರುವ ಕಾಂಕ್ರೀಟ್‌ಗಳಿಗೆ ಕಳಪೆ ಗುಣಮಟ್ಟದ ಸಿಮೆಂಟ್ ಹಾಗೂ ಮರಳನ್ನು ಬಳಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಲ್ಲಿ, ಇದನ್ನು ನಿಯಂತ್ರಿಸಲು ಸರ್ಕಾರದ ಕ್ರಮಗಳೇನು ?

## ಹೆದ್ದಾರಿ ರಸ್ತೆ ದುರಸ್ತಿ ಕಾಮಗಾರಿ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೧೭೨ (೯೪೧) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಯ ತಡಸದಿಂದ ಶಿವಮೊಗ್ಗದವರೆಗಿನ ಹೆದ್ದಾರಿಯು ಹಾಗೂ ಹಾನಗಲ್‌ನಿಂದ ಹಾವೇರಿವರೆಗಿನ ಹೆದ್ದಾರಿಯ ರಸ್ತೆ ದುರಸ್ತಿ ಕಾರ್ಯ ಪ್ರಾರಂಭವಾಗಿದ್ದು, ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಕಾಮಗಾರಿಗಳು ಪ್ರಾರಂಭವಾಗಿದ್ದು ಯಾವಾಗ, ಪೂರ್ಣಗೊಳಿಸಲು ಗಡುವು ನೀಡಲಾಗಿತ್ತೆ ; ನೀಡಲಾಗಿದ್ದರೆ ಗಡುವು ದಿನಾಂಕವೇನು ; ತಗಲುವ ವೆಚ್ಚವೆಷ್ಟು ? (ಪೂರ್ಣ ವಿವರ ತಿಳಿಸುವುದು)

## ಲೋಕೋಪಯೋಗಿ ರಸ್ತೆ ನಿರ್ಮಾಣ ಹಾಗೂ ಅಭಿವೃದ್ಧಿ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೭೩ (೯೩೮) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗುಲಬರ್ಗಾ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕಳೆದ ೫ ವರ್ಷಗಳ ಅವಧಿಯಲ್ಲಿ ಲೋಕೋಪಯೋಗಿ ಇಲಾಖೆ ವತಿಯಿಂದ ಕೈಗೊಂಡ ರಸ್ತೆ ನಿರ್ಮಾಣ, ಅಭಿವೃದ್ಧಿ ಕಾಮಗಾರಿಗಳು ಯಾವುವು ;

(ಆ) ಮೇಲ್ಕಂಡ ಕಾಮಗಾರಿಗಳಿಗೆ ಒದಗಿಸಲಾದ ಅನುದಾನ ಎಷ್ಟು ;

(ಇ) ವಿಳಂಬ ಗತಿಯಲ್ಲಿ ಕಾಮಗಾರಿಗಳು ಸಾಗುತ್ತಿರುವುದು ನಿಜವೇ ;

(ಈ) ಕಾಮಗಾರಿಗಳನ್ನು ಪೂರ್ಣಗೊಳಿಸುವ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳೇನು ?

## ರಸಗೊಬ್ಬರ ಮತ್ತು ಉತ್ತಮ ಬೀಜ ಸರಬರಾಜು

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೧೭೪ (೯೨೦) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ, ಗದಗ್ ಮತ್ತು ಹಾವೇರಿ ಜಿಲ್ಲೆಗಳಲ್ಲಿನ ರೈತರು ರಸಗೊಬ್ಬರ ಮತ್ತು ಬೀಜಗಳ ಸೂಕ್ತ ಸರಬರಾಜು ಇಲ್ಲದೇ ತೊಂದರೆಗಳನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ರೈತರಿಗೆ ಸಕಾಲದಲ್ಲಿ ರಸಗೊಬ್ಬರ ಮತ್ತು ಉತ್ತಮ ಬೀಜ ಒದಗಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ;

(ಇ) ರಸಗೊಬ್ಬರ ಮತ್ತು ಬೀಜಗಳಿಗಾಗಿ ಎಷ್ಟೆಷ್ಟು ಸಹಾಯಧನ ನೀಡಲಾಗುತ್ತಿದೆ ?

## ಗುತ್ತಿಗೆ ಕಾರ್ಮಿಕರು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೧೭೫ (೮೯೪) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಯಲ್ಲಿ ಇರುವ ಗುತ್ತಿಗೆ ಕಾರ್ಮಿಕರ ಸಂಖ್ಯೆ ಎಷ್ಟು ; ಅದರಲ್ಲಿ ಗುತ್ತಿಗೆ ಪೌರ ಕಾರ್ಮಿಕರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ಇಲಾಖಾವಾರು ಮಾಹಿತಿ ಒದಗಿಸುವುದು)

(ಆ) ಸದ್ಯದ ನಿಯಮದಂತೆ ಪ್ರತಿ ಪೌರ ಕಾರ್ಮಿಕರಿಗೆ ಮಾಸಿಕ ವೇತನ ನೀಡುತ್ತಿದೆಯೇ ;

(ಇ) ನೀಡುತ್ತಿದ್ದರೆ, ಬ್ಯಾಡಗೀ ಪಟ್ಟಣ ಹಾಗೂ ಇನ್ನಿತರ ಪಟ್ಟಣದ ಪೌರ ಕಾರ್ಮಿಕರು ಮುಷ್ಕರ ನಡೆಸಿದ್ದು ಏಕೆ ;

(ಈ) ಈ ಮುಷ್ಕರದಿಂದ ಕಸದ ರಾಶಿಗಳಿಂದ ಚರಂಡಿಗಳು ತುಂಬಿ ದುರ್ವಾಸನೆ ಹೊರಸೂಸುತ್ತಿರುವುದು ಮತ್ತು ಇದರಿಂದ ಸಾಂಕ್ರಾಮಿಕ ರೋಗ ಹರಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದರೆ, ಯಾವ ಕ್ರಮ ಕೈಗೊಳ್ಳಲಾಗಿದೆ ?

## ಮುಂಗಾರು ಹಂಗಾಮಿನಲ್ಲಿ ರೈತರಿಗೆ ಬೀಜ, ಗೊಬ್ಬರ ವಿತರಣೆ

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೭೬ (೯೦೯) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಜಿಲ್ಲೆಯ ರೈತರಿಗೆ ಪ್ರಸಕ್ತ ಮುಂಗಾರು ಸಮಯದಲ್ಲಿ ಅನುಕೂಲವಾಗುವಂತೆ ಸರ್ಕಾರ ಏನೇನು ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿದೆ ;

(ಆ) ಜಿಲ್ಲೆಯ ರೈತರಿಗೆ ಅವಶ್ಯಕತೆ ಇರುವ ಬೀಜ, ಗೊಬ್ಬರಗಳ ಪ್ರಮಾಣ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಅವಶ್ಯಕತೆ ಇರುವ ಪ್ರಮಾಣದ ಬೀಜ, ಗೊಬ್ಬರಗಳನ್ನು ಸಂಗ್ರಹಿಸಲಾಗಿದೆಯೇ ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಬೀಜ, ಗೊಬ್ಬರಗಳನ್ನು ರೈತರಿಗೆ ಯಾವಾಗ ವಿತರಿಸಲಾಗುತ್ತದೆ ?

## ತೋಟಗಾರಿಕೆಗೆ ನೀಡಿದ ಅನುದಾನ

**ಶ್ರೀ ಟಿ. ಜಾನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೭೭ (೮೯೧) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ಕೊಡಗು ಜಿಲ್ಲೆಗೆ ರಾಜ್ಯದ ನಿಧಿಯಿಂದ ತೋಟಗಾರಿಕೆಗೆ ನೀಡಿದ ಅನುದಾನವೆಷ್ಟು ; (ವರ್ಷವಾರು ವಿವರ ನೀಡುವುದು)

(ಆ) ಹಾಗೆ ನೀಡಿದ ಅನುದಾನದಲ್ಲಿ ವೆಚ್ಚವಾಗಿರುವ ಅನುದಾನವೆಷ್ಟು ಮತ್ತು ವೆಚ್ಚವಾಗದಿರಲು ಕಾರಣಗಳೇನು ?

## ಮಂಡ್ಯ – ಗುಬ್ಬಿ ರಸ್ತೆಯನ್ನು ಪೂರ್ಣಗೊಳಿಸುವುದು

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೭೮ (೯೪೪) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ – ಗುಬ್ಬಿ ರಸ್ತೆಯನ್ನು ಅಭಿವೃದ್ಧಿಗೊಳಿಸಲು ನಿಗದಿಪಡಿಸಿರುವ ಅನುದಾನವೆಷ್ಟು ; ಇದುವರೆವಿಗೂ ಬಿಡುಗಡೆ ಮಾಡಿರುವ ಅನುದಾನವೆಷ್ಟು ;

(ಆ) ಈ ಕಾಮಗಾರಿ ಯಾವ ಹಂತದಲ್ಲಿದೆ ;

(ಇ) ಈ ಕಾಮಗಾರಿಯನ್ನು ಪೂರ್ಣಗೊಳಿಸಲು ನಿಗದಿಪಡಿಸಿರುವ ಕಾಲಾವಕಾಶವೆಷ್ಟು ;

(ಈ) ಈ ರಸ್ತೆಯನ್ನು ಪೂರ್ಣಗೊಳಿಸುವುದು ಯಾವಾಗ ? (ಪೂರ್ಣ ವಿವರ ನೀಡುವುದು)

## ವಿನಿವಿಂಕ್ ಹಣದ ಮರುಪಾವತಿ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೭೯ (೮೯೫) ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿನಿವಿಂಕ್ ಹಣಕಾಸು ಸಂಸ್ಥೆಯಲ್ಲಿನ ಠೇವಣಿದಾರರಿಗೆ ಠೇವಣಿ ಮರುಪಾವತಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ಠೇವಣಿ ಹಣವನ್ನು ಯಾವಾಗ ಮರುಪಾವತಿಸಲಾಗುವುದು ?

## ಗುಂಡಿ ಬೀಳದ ರಸ್ತೆಗಳ ನಿರ್ಮಾಣ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು)** –

೧೮೦ (೯೭೬) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ಕೃಷ್ಟ, ರಾಷ್ಟ್ರೀಯ, ಅಂತರರಾಷ್ಟ್ರೀಯ ದರ್ಜೆಗಳ ಮತ್ತು ಗುಂಡಿಬೀಳದ ರಸ್ತೆಗಳನ್ನು ರಾಜ್ಯದಲ್ಲಿ ನಿರ್ಮಾಣ ಮಾಡುವ ಬಗ್ಗೆ ಸರ್ಕಾರ/ಅಧಿಕಾರಿಗಳು ದೇಶದಲ್ಲಿ ಅಥವಾ ಹೊರ ದೇಶಗಳಲ್ಲಿ ಅಧ್ಯಯನಗಳನ್ನು (ಈ ಹಿಂದೆ) ಮಾಡಿದ್ದಾರೆಯೇ ;

(ಆ) ಮಾಡಿದ್ದರೆ, ಸರ್ಕಾರಕ್ಕೆ ವರದಿಗಳನ್ನು ಸಲ್ಲಿಸಿದ್ದಾರೆಯೇ ; (ವರದಿಯ ಹೆಸರು ಮತ್ತು ಪ್ರತಿ ವರದಿಯ ಮುಖ್ಯಾಂಶಗಳನ್ನು ನೀಡುವುದು)

(ಇ) ಈ ಅಧ್ಯಯನ ವರದಿಗಳನ್ನು ಸರ್ಕಾರ ರಸ್ತೆ ನಿರ್ಮಾಣ ಕಾಮಗಾರಿಗಳಲ್ಲಿ ಅಳವಡಿಸಿಕೊಂಡಿದೆಯೇ ;

(ಈ) ಅಳವಡಿಸಿಕೊಂಡಿದ್ದಲ್ಲಿ, ಪರಿಣಾಮಗಳೇನು ;

(ಉ) ಅಳವಡಿಸಿಕೊಳ್ಳದಿದ್ದಲ್ಲಿ, ಕಾರಣಗಳೇನು ;

(ಊ) ಭವಿಷ್ಯತ್ತಿನಲ್ಲಿ, ಗುಂಡಿ ಬೀಳದ ರಸ್ತೆಗಳನ್ನು ನಿರ್ಮಾಣ ಮಾಡಲು ಸರ್ಕಾರದ ಯೋಜನೆ ಏನಿದೆ ?

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಪಿ8, ಕಾ.ಸೂ. 307, ಪ್ರತಿಗಳು 1500